# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: MU/EXB/CR77/BPED/2022-23/E.26

ಕುಲಸಚಿವರ (ಪರೀಕ್ಷಾಂಗ) ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 30.06.2023

## ಪ್ರಕಟಣೆ

2023ರ ಆಗಸ್ಟ್ ತಿಂಗಳಲ್ಲಿ ನಡೆಯಲಿರುವ ಬಿ.ಪಿ.ಎಡ್. ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್ ಪದವಿಯ ಲಿಖಿತ ಪರೀಕ್ಷೆಗಳು ದಿನಾಂಕ **08.08.2023ರಿಂದ** ಪ್ರಾರಂಭವಾಗಲಿರುವುದು ಎಂಬುದನ್ನು ಅಧ್ಯಕ್ಷರು/ಪ್ರಾಂಶುಪಾಲರು ಮತ್ತು ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

**ಸೂಚನೆಗಳು:**

1. ಮೇಲಿನ ಸೆಮಿಸ್ಟರ್ ನಿಯಮಿತ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ **UUCMS Portal** ನಲ್ಲಿ ನೋಂದಣಿ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಪರೀಕ್ಷಾ ಶುಲ್ಕವನ್ನು Online ನಲ್ಲಿಯೇ **UUCMS Portal** ನ ಮುಖಾಂತರ ಪಾವತಿಸತಕ್ಕದ್ದು. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು.

2. ದ್ವಿತೀಯ ಮತ್ತು ಚತುರ್ಥ ಸೆಮಿಸ್ಟರ್ **ಪುನರಾವರ್ತಿತ** ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಈ ಕೆಳಗಿನಂತೆ ನೋಂದಾಯಿಸತಕ್ಕದ್ದು.
   - 2021-22ನೇ ಸಾಲಿಗಿಂತ ಮೊದಲು ಪ್ರವೇಶಾತಿ ಪಡೆದ (MuLinx ಬ್ಯಾಚ್‌ನ) ವಿದ್ಯಾರ್ಥಿಗಳ ಅರ್ಜಿಯನ್ನು MuLinx Portalನಲ್ಲಿ ನೋಂದಾಯಿಸಿ, ಪರೀಕ್ಷಾ ಶುಲ್ಕವನ್ನು ಬ್ಯಾಂಕ್ ಚಲನ್ ಮೂಲಕ ಪಾವತಿಸತಕ್ಕದ್ದು.
   - 2021-22 ಹಾಗೂ ನಂತರ ಪ್ರವೇಶಾತಿ ಪಡೆದ **(UUCMS** ಬ್ಯಾಚ್‌ನ) ವಿದ್ಯಾರ್ಥಿಗಳ ಅರ್ಜಿಯನ್ನು **UUCMS Portal** ನಲ್ಲಿ ನೋಂದಾಯಿಸಿ, ಶುಲ್ಕವನ್ನು ಆನ್-ಲೈನ್‌ನಲ್ಲಿಯೇ **UUCMS Portal** ಮೂಲಕ ಪಾವತಿಸತಕ್ಕದ್ದು.
   - **UUCMS Portal ನಲ್ಲಿ Online/Offline ನಲ್ಲಿ ಶುಲ್ಕ ಪಾವತಿಸಿದ (Report) ಪ್ರತಿಯನ್ನು ಪ್ರಾಂಶುಪಾಲರು ದೃಢೀಕರಿಸಿ ಕುಲಸಚಿವರು (ಪರೀಕ್ಷಾಂಗ) ರ ಕಛೇರಿಗೆ ನಿಗಧಿತ ಸಮಯದೊಳಗೆ ತಪ್ಪದೆ ಕಳುಹಿಸಿಕೊಡುವುದು**
   - **ಆಂತರಿಕ ಅಂಕಗಳ ಪಟ್ಟಿಯನ್ನು Online ನಲ್ಲಿ ಭರ್ತಿ ಮಾಡಿದ ನಂತರ ವಿದ್ಯಾರ್ಥಿಗಳ ಸಹಿ ಪಡೆದು ಕಡ್ಡಾಯವಾಗಿ ಕುಲಸಚಿವರು (ಪರೀಕ್ಷಾಂಗ)ರ ಕಛೇರಿಗೆ ಕಳುಹಿಸತಕ್ಕದ್ದು.**

3. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

4. ***ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.***

5. ***ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವಂತಿಲ್ಲ ಮತ್ತು ಅಂತಹ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆ ಕೂಡಾ ನಡೆಸಬಾರದು.**

6. ವಿದ್ಯಾರ್ಥಿಗಳು ತಮಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.

7. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.*

8. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು / ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

9. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*

10. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ವಿಭಾಗದ ಅಧ್ಯಕ್ಷರು/ಕಾಲೇಜಿನ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಮತ್ತು ಅಭ್ಯರ್ಥನ ಪತ್ರಗಳನ್ನು ಸಲ್ಲಿಸಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

**<u>ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:</u>**

**ದಂಡಶುಲ್ಕ ರಹಿತ ... 14.07.2023**
**ದಂಡಶುಲ್ಕ ದಿನವೊಂದಕ್ಕೆ ರೂ. 55/- ರಂತೆ ... 15.07.2023 ರಿಂದ 19.07.2023ರವರೆಗೆ**
**ದಂಡಶುಲ್ಕ ದಿನವೊಂದಕ್ಕೆ ರೂ. 110/- ರಂತೆ ... 21.07.2023 ರಿಂದ 25.07.2023ರವರೆಗೆ**

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

12. ***ಪರೀಕ್ಷಾ ಶುಲ್ಕದ ದರ :***

**ಪೂರ್ಣ ಪರೀಕ್ಷೆಗೆ** ..... **ರೂ. 1,320.00**

**ವಿಷಯವೊಂದಕ್ಕೆ** ..... **ರೂ. 460.00**

13. ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

14. ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಎಲ್ಲಾ ಶುಲ್ಕಗಳ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

15. ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ರೂ.230.00 ಅಂಕಪಟ್ಟಿ ಶುಲ್ಕ ಮತ್ತು ರೂ.120.00 ಆನ್‌ಲೈನ್ ಪ್ರೊಸೆಸಿಂಗ್ ಶುಲ್ಕಗಳನ್ನು ಪಾವತಿಸತಕ್ಕದ್ದು.

16. ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ. ಸದ್ರಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಕಾಲೇಜು ಮುಖ್ಯಸ್ಥರು ಸಮಾಜ ಕಲ್ಯಾಣ ಇಲಾಖೆಯಿಂದ ಮರುಭರಣೆ ಪಡೆದು ಹಿಂದಿನ ವರ್ಷಗಳ ಶುಲ್ಕ ಬಾಕಿಯಿದ್ದಲ್ಲಿ ಅದನ್ನು ವಿಶ್ವವಿದ್ಯಾನಿಲಯ ನಿಧಿಗೆ ಜಮೆ ಮಾಡುವಂತೆ ತಿಳಿಸಲಾಗಿದೆ.

ಆ) ಆ) ಪ್ರ. ವರ್ಗ-1 (ಆದಾಯ ಮಿತಿ ರೂ.2,50,000.00 ಮೀರದ) ಹಾಗೂ ಇತರೇ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ. 1,00,000.00ಕ್ಕಿಂತ ಕಡಿಮೆ ಇರುವ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ತದನಂತರ ಕಾಲೇಜು ಪ್ರಾಂಶುಪಾಲರ ಮೂಲಕ ಸಂಬಂಧಪಟ್ಟ ಇಲಾಖೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಬ್ಯಾಂಕ್ ಖಾತೆಗೆ ಜಮೆ ಮಾಡುವ ಬಗ್ಗೆ ಕ್ಲೇಮು ಸಲ್ಲಿಸುವುದು.

ಇ) ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯುವ ವಿದ್ಯಾರ್ಥಿಗಳೂ ಸೇರಿದಂತೆ ಎಲ್ಲಾ ವಿದ್ಯಾರ್ಥಿಗಳು ರೂ. 230.00 ಅಂಕಪಟ್ಟಿ ಶುಲ್ಕ ಮತ್ತು ರೂ.120.00 ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

17. ವಿದ್ಯಾರ್ಥಿಗಳಿಂದ ಪಡೆದ ಒಟ್ಟು ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯ ನಿಧಿಗೆ ಪಾವತಿಸತಕ್ಕದ್ದು.

ಅ) ಅರ್ಜಿ ಶುಲ್ಕ ... 008/14

ಆ) ಪರೀಕ್ಷಾ ಶುಲ್ಕ ... 008/23

ಇ) ಅಂಕಪಟ್ಟಿ ಶುಲ್ಕ ... 008/24

18. ಈ ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ತಪ್ಪದೇ ಈ ಕಛೇರಿಗೆ ದಿನಾಂಕ 26.07.2023ರ ಒಳಗಾಗಿ ಕಳುಹಿಸಿಕೊಡುವುದು.

ಅ) ಆನ್‌ಲೈನ್ ಅಭ್ಯರ್ಥನ ಪಟ್ಟಿ (ದ್ವಿಪ್ರತಿಗಳಲ್ಲಿ)

ಆ) ಪುನರಾವರ್ತಿತ ವಿದ್ಯಾರ್ಥಿಗಳ (MU Linx) ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಚಲನ್ ಅಥವಾ ಡಿ.ಡಿ.

ಇ) ಹಣಕಾಸು ತ:ಖ್ತೆ - ಆನ್‌ಲೈನ್ ಪ್ರಿಂಟೌಟ್

ಈ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತ:ಖ್ತೆ. ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೆ ಕಳುಹಿಸಿಕೊಡುವುದು.

19. ಆಂತರಿಕ ಮಾಪನದ ಅಂಕಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ, ಅಂತಿಮ ಆನ್‌ಲೈನ್ ಪ್ರಿಂಟೌಟ್ ಪ್ರತಿಗಳನ್ನು (ದ್ವಿಪ್ರತಿಗಳಲ್ಲಿ) ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ 15 ದಿನಗಳ ಮುಂಚಿತವಾಗಿ ಈ ಕಛೇರಿಗೆ ತಪ್ಪದೆ ಸಲ್ಲಿಸಲು ತಿಳಿಸಲಾಗಿದೆ.

ಕುಲಸಚಿವರು (ಪರೀಕ್ಷಾಂಗ)

ಲಗತ್ತು: ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತ:ಖ್ತೆ

ರಿಗೆ:

1) ಅಧ್ಯಕ್ಷರು, ಬಿ.ಪಿ.ಎಡ್. ಕೋರ್ಸ್, ದೈಹಿಕ ಶಿಕ್ಷಣ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ.

2) ಪ್ರಾಂಶುಪಾಲರು, ಆಳ್ವಾಸ್ ಕಾಲೇಜ್ ಆಫ್ ಫಿಸಿಕಲ್ ಎಜ್ಯುಕೇಶನ್, ಮೂಡಬಿದಿರೆ.

ಪ್ರತಿ :

1. ಕುಲಸಚಿವರು / ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ಉಪಕುಲಸಚಿವರು(ಪರೀಕ್ಷಾಂಗ) ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ.
3. ವಿಶೇಷಾಧಿಕಾರಿ (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
4. ಸಹಾಯಕ ಕುಲಸಚಿವರು(ಪರೀಕ್ಷಾಂಗ) 1 & 2, ಮಂಗಳೂರು ವಿಶ್ವವಿದ್ಯಾನಿಲಯ.
5. ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
6. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು.
7. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಡಿ.ಸಿ. ಆಫೀಸಿನ ಬಳಿ, ದ.ಕ., ಮಂಗಳೂರು.
8. ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4, ಎಸ್.6.
9. ಕುಲಸಚಿವರು (ಪರೀಕ್ಷಾಂಗ)ರವರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.